ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1719
ಮಾನ್ಯ ಸದಸ್ಯರ ಹೆಸರು	ಶ್ರೀ ಹೆಚ್.ಎಂ.ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	23.03.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸ	ಪ್ರಶ್ನೆ	ಉತ್ತರ
ಅ)	2019–20 ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಹೊಸದಾಗಿ ವಿದ್ಯಾರ್ಥಿ ವೇತನದ ಅರ್ಜಿಗಳನ್ನು ಆಹ್ವಾನಿಸಬಾರದು ಎಂಬುದಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿಗಳಿಗೆ ಸುತ್ತೋಲೆ ಹೊರಡಿಸಿರುವುದು ಹಾಗೂ ಪತ್ರ ಬರೆದಿರುವುದು ನಿಜವೇ;	2019–20ನೇ ಸಾಲಿನಲ್ಲಿ ಸುಮಾರು 32.00 ಲಕ್ಷ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ನೀಡಲು ರೂ.282.56 ಕೋಟಿ ಅನುದಾನವನ್ನು ಆಯವ್ಯಯದಲ್ಲಿ ಒದಗಿಸುವಂತೆ ಕೋರಲಾಗಿದ್ದರೂ ಸಹ ರೂ.105.67 ಕೋಟಿ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿತ್ತು. ಪ್ರಯುಕ್ತ ಒದಗಿಸಲಾಗಿದ್ದ ಅನುದಾನದಲ್ಲಿ ಎಲ್ಲಾ ನವೀಕರಣ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಸಾಧ್ಯವಾಗದ ಪ್ರಯುಕ್ತ 2019–20ನೇ ಸಾಲಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮಂಜೂರಾತಿಗೆ ಹೊಸ ವಿದ್ಯಾರ್ಥಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.
ಆ)	ಹಾಗಿದ್ದಲ್ಲಿ, ಅಂದಾಜು ಎಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಸಾಧ್ಯವಾಗಿರುವುದಿಲ್ಲ;	ಸುಮಾರು 1.75ಲಕ್ಷ ಹೊಸ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಸಾಧ್ಯವಾಗಿರುವುದಿಲ್ಲ.
ಇ)	ಈ ರೀತಿ ಸುತ್ತೋಲೆ ಹೊರಡಿಸಲು ಕಾರಣಗಳೇನು;	2019–20ನೇ ಸಾಲಿನಲ್ಲಿ ಸುಮಾರು 32.00 ಲಕ್ಷ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ನೀಡಲು ರೂ. 282.56 ಕೋಟಿ ಅನುದಾನವನ್ನು ಆಯವ್ಯಯದಲ್ಲಿ ಒದಗಿಸುವಂತೆ ಕೋರಲಾಗಿದ್ದರೂ ಸಹ ರೂ.105.67 ಕೋಟಿ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿತ್ತು. 2018–19ನೇ ಸಾಲಿನಲ್ಲಿ ಸುಮಾರು 21.60 ಲಕ್ಷ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿದ್ದು, 2019–20 ನೇ ಸಾಲಿನಲ್ಲಿ ಸುಮಾರು 19.80 ಲಕ್ಷ ನವೀಕರಣ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಕಡ್ಡಾಯವಾಗಿ ನೀಡಬೇಕಾದ ಅನಿವಾರ್ಯತೆ ಇದ್ದ ಕಾರಣ ಹಾಗೂ ಆಯವ್ಯಯದ ಕೊರತೆಯ ಕಾರಣ ಹೊಸದಾಗಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿರುವುದಿಲ್ಲ.
ಈ)	ಈ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?	2019–20ನೇ ಸಾಲಿನಲ್ಲಿ ಈಗಾಗಲೇ ಮಂಜೂರಾತಿ ನೀಡಿರುವ ವಿದ್ಯಾರ್ಥಿಗಳೂ ಸೇರಿದಂತೆ ಮುಂದಿನ ಆರ್ಥಿಕ ವರ್ಷದಲ್ಲಿ ಹೊಸದಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಅನುದಾನದ ಲಭ್ಯತೆ ಆಧರಿಸಿ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುವುದು.

ಸಂಖ್ಯೆ:ಹಿಂವಕ 218 ಬಿಎಂಎಸ್ 2020

(ಬಿ. ಶ್ರೀರಾಮುಲು)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ